# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 800 |
| ಸದಸ್ಯರ ಹೆಸರು | : | ಶ್ರೀ ಬಿ.ಎಂ. ಫಾರುಖ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 23-02-2022 |
| ಉತ್ತರಿಸುವ ಸಚಿವರು | : | ಮಾನ್ಯ ಲೋಕೋಪಯೋಗಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಬೆಂಗಳೂರು-ಮಂಗಳೂರು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಯಲ್ಲಿನ ಶಿರಾಡಿ ಘಾಟ್ ರಸ್ತೆಯು ಕಿರಿಯದಾಗಿರುವುದರಿಂದ ಹಾಗೂ ಮಳೆಗಾಲದಲ್ಲಿ ಪದೇ ಪದೇ ಹಾಳಾಗುತ್ತಿರುವುದರಿಂದ ಈ ರಸ್ತೆಯಲ್ಲಿ ಓಡಾಡಲು ದುಸ್ತರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ. | ಹೌದಾದಲ್ಲಿ, ರಾಜ್ಯದ ಜೀವನಾಡಿಯಾದ ಶಿರಾಡಿ ಘಾಟ್ ರಸ್ತೆಯನ್ನು ನಾಲ್ಕು ಪಥ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು; ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು? | ಹಾಸನ-ಮಂಗಳೂರು ರಸ್ತೆಯಲ್ಲಿ ಬರುವ ಶಿರಾಡಿ ಘಾಟ್ ಕಿ.ಮೀ.229.00 ರಿಂದ 263.00 ರವರೆಗೆ ಒಟ್ಟು 34.00 ಕಿ.ಮೀ. ಉದ್ದವಿರುತ್ತದೆ. ಶಿರಾಡಿಘಾಟ್ ರಸ್ತೆಯ ಸರಪಳಿ 229.00 ರಿಂದ 237.00 ಕಿ.ಮೀ.ವರೆಗೆ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಹಸ್ತಾಂತರಿಸುವ ಭಾಗದ 8.00 ಕಿಮೀ ಘಾಟ್ ರಸ್ತೆಯನ್ನು 4 ಪಥದ ರಸ್ತೆಯನ್ನಾಗಿಸಲು ಈಗಾಗಲೇ ಪ್ರಗತಿಯಲ್ಲಿರುವ ಹಾಸನ-ಮಾರನಹಳ್ಳಿ (ಕಿ.ಮೀ.189.002 ರಿಂದ 237.00 ರವರೆಗೆ) ಪ್ಯಾಕೇಜ್‌ಲ್ಲಿ ಸೇರ್ಪಡೆಗೊಂಡಿದ್ದು ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಉಳಿದ ಘಾಟ್ ರಸ್ತೆ ಭಾಗವಾದ ರಸ್ತೆ ಸರಪಳಿ ಕಿಮೀ.237.00 ರಿಂದ 263.00 ವರೆಗಿನ ಒಟ್ಟು 26.00 ಕಿಮೀ. ರಸ್ತೆಯನ್ನು 4 ಪಥದ ರಸ್ತೆಯನ್ನಾಗಿ ನಿರ್ಮಿಸಲು ವಿಸ್ತೃತ ಅಂದಾಜು ವರದಿಯನ್ನು ತಯಾರಿಸಲು ದಿನಾಂಕ:14.02.2022 ರಂದು ಸಮಾಲೋಚಕರನ್ನು ನೇಮಿಸಿರುವುದಾಗಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ರವರು ತಿಳಿಸಿರುತ್ತಾರೆ.<br><br>ಮುಂದುವರೆದು, ಈ ಯೋಜನೆಯ ವಿಸ್ತೃತ ಅಂದಾಜು ವರದಿಯನ್ನು (DPR) ಪಡೆದ ನಂತರ ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು ಎಂಬ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ. |

ಕಡತ ಸಂಖ್ಯೆ: ಲೋಇ 69 ಸಿಎನ್‌ಹೆಚ್ 2022 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು